ಸದನದಲ್ಲಿ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತೊಂದನೆಯ ಅಧಿವೇಶನ

ಬುಧವಾರ, ದಿನಾಂಕ : 30 ನೇ ಸೆಪ್ಟೆಂಬರ್, 2020

ಕರ್ನಾಟಕ ರಿಯಲ್ ಎಸ್ಟೇಟ್ ನಿಯಂತ್ರಣ ಪ್ರಾಧಿಕಾರ (RERA) ಸ್ಥಾಪನೆ ಬಗ್ಗೆ

ಶ್ರೀ ಕೆ. ಗೋವಿಂದರಾಜ್(ವಿಧಾನಸಭೆಯಿಂದ ಚುನಾಯಿತರಾದವರು) –

111 (1229) ವಸತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಕರ್ನಾಟಕ ರಿಯಲ್ ಎಸ್ಟೇಟ್ ನಿಯಂತ್ರಣ ಪ್ರಾಧಿಕಾರ (RERA) ಯಾವಾಗ ಸ್ಥಾಪನೆಯಾಯಿತು; ಇದರ ಅಧ್ಯಕ್ಷರು ಮತ್ತು ಸದಸ್ಯರು ಯಾರು; (ಹೆಸರು, ಅವಧಿ, ವಿವರ ನೀಡುವುದು)

(ಆ) ಈ ಪ್ರಾಧಿಕಾರ ಸ್ಥಾಪನೆಯ ಉದ್ದೇಶ ಹಾಗೂ ಕಾರ್ಯವ್ಯಾಪ್ತಿ ಏನು;

(ಇ) ಈ ಪ್ರಾಧಿಕಾರದಡಿ ನೋಂದಾಯಿತವಾಗಿರುವ ರಿಯಲ್ ಎಸ್ಟೇಟ್ ಸಂಸ್ಥೆಗಳು ಎಷ್ಟು;

(ಈ) ಈ ಪ್ರಾಧಿಕಾರದಡಿ ನೋಂದಾಯಿತವಾಗಿರುವ ಯೋಜನೆಗಳೆಷ್ಟು; ಅವುಗಳಲ್ಲಿ ಎಷ್ಟು ಯೋಜನೆಗಳು ನಿಗಧಿತ ಅವಧಿಯೊಳಗೆ ಪೂರ್ಣಗೊಂಡಿವೆ; ಎಷ್ಟು ಯೋಜನೆಗಳು ಅವಧಿಯೊಳಗೆ ಪೂರ್ಣಗೊಂಡಿಲ್ಲ; ಇದಕ್ಕೆ ಕಾರಣಗಳೇನು;

(ಉ) ಈ ಪ್ರಾಧಿಕಾರ ಪರಿಣಾಮಕಾರಿಯಾಗಿ ಕೆಲಸ ನಿರ್ವಹಿಸುತ್ತಿದೆಯೇ; ಸ್ಥಾಪನೆಯ ಉದ್ದೇಶ ಈಡೇರಿದೆ ಎಂದು ಸರ್ಕಾರಕ್ಕೆ ಅನಿಸುತ್ತಿದೆಯೆ?